# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 535 |
| ಸದಸ್ಯರ ಹೆಸರು | : | ಡಾ: ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 22.12.2022 |
| ಉತ್ತರಿಸುವ ಸಚಿವರು | : | ಮಾನ್ಯ ಜಲಸಂಪನ್ಮೂಲ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆ ಕಾರಂಜಾ ಡ್ಯಾಂ ನಿರ್ಮಾಣದ ಸಮಯದಲ್ಲಿ ಭೂಮಿ ಕಳೆದುಕೊಂಡ ರೈತರಿಗೆ ಇಲ್ಲಿಯವರೆಗೆ ಪರಿಹಾರ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕಾರಂಜಾ ಜಲಾಶಯ ನಿರ್ಮಾಣದಿಂದ ಹಿನ್ನೀರಿನಲ್ಲಿ ಸುಮಾರು 15597 ಎಕರೆ ಮುಳುಗಡೆಯಾಗಿದ್ದು, ಸದರಿ ಭೂಮಿಯನ್ನು ಈಗಾಗಲೇ ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆ. ಏಳು ಗ್ರಾಮಗಳು ಸಂಪೂರ್ಣವಾಗಿ, ಒಂದು ಗ್ರಾಮ ಭಾಗಶಃ ಮುಳುಗಡೆಯಾಗಿದ್ದು, ನಿರಾಶ್ರಿತ ಕುಟುಂಬಗಳಿಗೆ ಎಂಟು ಪುನರ್ ವಸತಿ ಕೇಂದ್ರಗಳನ್ನು ನಿರ್ಮಿಸಲಾಗಿದೆ. |
| ಆ) | ಬಂದಿದ್ದಲ್ಲಿ, ಸರ್ಕಾರ ಇಲ್ಲಿಯವರೆಗೆ ಪರಿಹಾರ ನೀಡದಿರಲು ಕಾರಣವೇನು; | ಕಾರಂಜಾ ಯೋಜನೆಯಡಿ ಇಲ್ಲಿಯವರೆಗೆ ಹಿನ್ನೀರಿನಲ್ಲಿ, ಬಲದಂಡೆ ಕಾಲುವೆ, ಎಡದಂಡೆ ಕಾಲುವೆ, ಅತಿವಾಳ ಏತ ನೀರಾವರಿ ಯೋಜನೆಯಡಿ ಒಟ್ಟು 20,850 ಎಕರೆ 12 ಗುಂಟೆ ಜಮೀನು ಭೂಸ್ವಾಧೀನವಾಗಿದ್ದು, ಭೂಸ್ವಾಧೀನಗೊಂಡ ಎಲ್ಲಾ ರೈತರುಗಳಿಗೆ ಭೂಸ್ವಾಧೀನ ಕಾಯ್ದೆ ಪ್ರಕಾರ ಮಂಜೂರಾದ ಅವಾರ್ಡ್ ಅನ್ವಯ ರೂ.163.35 ಕೋಟಿ ಪರಿಹಾರ ಧನವನ್ನು ವಿತರಿಸಲಾಗಿದೆ. ಹೆಚ್ಚುವರಿ ಪರಿಹಾರ ಧನಕ್ಕಾಗಿ ನ್ಯಾಯಾಲಯಕ್ಕೆ ಮೊರೆ ಹೋಗಿದ್ದ ರೈತರಿಗೂ ಕೂಡ ಮಾನ್ಯ ನ್ಯಾಯಾಲಯದ ಆದೇಶದಂತೆ ಪರಿಹಾರ ಧನ ವಿತರಿಸಲಾಗಿದೆ. |
| ಇ) | ಕಾರಂಜಾ ಡ್ಯಾಂ ನಿರ್ಮಾಣದಿಂದ ಭೂಮಿ ಕಳೆದುಕೊಂಡವರಿಗೆ ಇಲ್ಲಿಯವರೆಗೆ ಎಷ್ಟು ರೈತರಿಗೆ ಪರಿಹಾರ ನೀಡಲಾಗಿದೆ; (ವಿವರಒದಗಿಸುವುದು) | |

ಸಂಖ್ಯೆ: ಜಸಂಇ 200 ಎಂಎಲ್ಎ 2022

(ಗೋವಿಂದ ಎಂ.ಕಾರಜೋಳ)
ಜಲಸಂಪನ್ಮೂಲ ಸಚಿವರು